## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 455
ಸದಸ್ಯರ ಹೆಸರು : ಶ್ರೀ ಆರ್.ಬಿ.ತಿಮ್ಮಾಪೂರ
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 18.02.2022

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದ ಎಲ್ಲಾ ಸಾರಿಗೆ ಸಂಸ್ಥೆಗಳ ಆರ್ಥಿಕ ಸ್ವಾವಲಂಬನೆ ಮತ್ತು ಸಂಪನ್ಮೂಲ ಕ್ರೋಢೀಕರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ರಾಜ್ಯದ ಎಲ್ಲಾ ಸಾರಿಗೆ ಸಂಸ್ಥೆಗಳ ಆರ್ಥಿಕ ಸ್ವಾವಲಂಬನೆ ಮತ್ತು ಸಂಪನ್ಮೂಲ ಕ್ರೋಢೀಕರಣಕ್ಕೆ ಸಂಬಂಧಪಟ್ಟಂತೆ ಶ್ರೀ ಎಂ. ಆರ್. ಶ್ರೀನಿವಾಸಮೂರ್ತಿ, ಭಾ.ಆ.ಸೇ, (ನಿವೃತ್ತ) ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ, ರಾಜ್ಯದ ಎಲ್ಲಾ ರಸ್ತೆ ಸಾರಿಗೆ ಸಂಸ್ಥೆಗಳ ಸ್ವಾವಲಂಬನೆ ಮತ್ತು ಸಂಪನ್ಮೂಲ ಕ್ರೋಢೀಕರಣಗಳ ಸಂಪೂರ್ಣ ಅಧ್ಯಯನ ನಡೆಸಿ ಮೂರು ತಿಂಗಳ ಒಳಗಾಗಿ ವರದಿಯನ್ನು ನೀಡುವಂತೆ ಸರ್ಕಾರ ಆದೇಶ ಸಂಖ್ಯೆ: ಟಿಡಿ 167 ಟಿಸಿಒ 2021 ದಿನಾಂಕ:30.11.2021 ರಂದು ಆದೇಶ ಹೊರಡಿಸಲಾಗಿದೆ.<br>ಮುಂದುವರೆದು, ಈ ಕೆಳಕಂಡಂತೆ ನಿಗಮವಾರು ಕ್ರಮಗಳ ವಿವರ ನೀಡಲಾಗಿದೆ.<br>ಕ.ರಾ.ರ.ಸಾ.ನಿಗಮ |
| ಆ. | ಕೋವಿಡ್ ಸಂದರ್ಭದಲ್ಲಿ ಉಂಟಾದ ನಷ್ಟವನ್ನು ಸರಿದೂಗಿಸುವುದಕ್ಕೆ ಸರ್ಕಾರದ ಮುಂದಿರುವ ಯೋಜನೆಗಳೇನು? | • ನಿಗಮದ ಸಾರಿಗೆಗಳ ಆಚರಣೆಯನ್ನು ಸುಗಮ ಸ್ಥಿತಿಗೆ ತರಲು ಹಂತ-ಹಂತವಾಗಿ ಕೋವಿಡ್- 1 9 ಲಾಕ್‌ಡೌನ್ ಪೂರ್ವದಲ್ಲಿದ್ದಂತೆ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>• ಅಂತರರಾಜ್ಯ ಸಂಚಾರಕ್ಕೆ ಸಂಬಂಧಿಸಿದಂತೆ, ಆಂಧ್ರಪ್ರದೇಶ, ಕೇರಳ, ಗೋವಾ, ಮಹಾರಾಷ್ಟ್ರ, ತೆಲಂಗಾಣ, ಪುದುಚೇರಿ ಹಾಗೂ ತಮಿಳುನಾಡು ರಾಜ್ಯಕ್ಕೆ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ.<br>• ಪ್ರಯಾಣಿಕರಿಂದ ಕಡಿಮೆ ಬೇಡಿಕೆ ಇರುವ ಕಾರಣ ಪೂರ್ಣ ಪ್ರಮಾಣದಲ್ಲಿ ಅನುಸೂಚಿಗಳನ್ನು ಕಾರ್ಯಾಚರಣೆ ಮಾಡಲು ಸಾಧ್ಯವಾಗಿರುವುದಿಲ್ಲ. ಆದಾಗ್ಯೂ, ಪ್ರಯಾಣಿಕರ ದಟ್ಟಣೆ ಮತ್ತು ಅವಶ್ಯಕತೆಗೆ ಅನುಗುಣವಾಗಿ ಬಸ್ಸುಗಳ ಸಂಖ್ಯೆಯನ್ನು ಹೆಚ್ಚಿಸಲಾಗುತ್ತಿದೆ.<br>• ಪ್ರತಿಷ್ಠಿತ ಸಾರಿಗೆಗಳಲ್ಲಿ ವಿಶೇಷವಾಗಿ ಹವಾನಿಯಂತ್ರಿತ ವಾಹನಗಳಲ್ಲಿ ಬೇಡಿಕೆಯು ತೀವ್ರವಾಗಿ ಕುಸಿದಿದ್ದು, ಸದರಿ ವರ್ಗದ ಸಾರಿಗೆಗಳನ್ನು ಸಹ ಬೇಡಿಕೆಗೆ ಅನುಗುಣವಾಗಿ ಹೆಚ್ಚಿಸಲಾಗುತ್ತಿದೆ.<br>• ಪಾರ್ಸಲ್ ಯೋಜನೆಯನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು |

